<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಲಯ ,</u>
<u>ಶ್ರೀರಂಗಪಟ್ಟಣ</u>

<u>ಸಿ.ಸಿ.388/2018</u>

| | |
|---|---|
| ಸಿ.ಡಬ್ಲ್ಯೂ ಃ | 11 |
| ಪಿ.ಡಬ್ಲ್ಯೂ ಃ | 07 |

| | | |
|---|---|---|
| ಸಾಕ್ಷಿದಾರರ ಹೆಸರು | ಃ | ಬ್ಯಾಟರಾಯಿ ಗೌಡ |
| ತಂದೆ/ ಪತಿಯ ಹೆಸರು | ಃ | ಪಾಥಯ್ಯ |
| ವಯಸ್ಸು | ಃ | 43 ವರ್ಷ |
| ವೃತ್ತಿ | ಃ | ಪಿ.ಐ, ಕರ್ನಾಟಕ ಲೋಕಾಯುಕ್ತ, ಮಂಡ್ಯ |
| ವಾಸ | ಃ | ಮೈಸೂರು |

**<u>ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕಃ 14.07.2026</u>**

**<u>ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ರವರಿಂದ</u>**

ನಾನು ದಿಃ 21.07.2017 ರಿಂದ 10.09.2018 ವರೆಗೆ ಕೆ.ಆರ್.ಸಾಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿಃ 13.03.2018 ರಂದು ರಾತ್ರಿ 08.15 ಸಮಯದಲ್ಲಿ ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಪರಿಶೀಲಿಸಿ ನಮ್ಮ ಠಾಣಾ ಮೊಕದ್ದಮೆ ಸಂಃ 84/2018 ರಂತೆ ಪ್ರಕರಣ ದಾಖಲಿಸಿ ಪ್ರ.ವ.ವರದಿ ತಯಾರಿಸಿ ನ್ಯಾಯಾಲಯಕ್ಕೆ ಮತ್ತು ನನ್ನ ಮೇಲಾಧಿಕಾರಿವರಿಗೆ ಸಲ್ಲಿಸಿರುತ್ತೇನೆ.

ಸಾಕ್ಷಿಗೆ ಈ ಹಂತದಲ್ಲಿ ಒಂದು ದಾಖಲೆ ತೋರಿದ್ದು ಸದರಿ ದಾಖಲೆ ಚಾಸಾ.1 ರವರ ನೀಡಿದ ಲಿಖಿತ ದೂರಾಗಿದ್ದು ಅದನ್ನು ಸಾಕ್ಷಿ ನೋಡಿ ಗುರುತಿಸಿದ್ದು ಸದರಿ ದಾಖಲೆಯು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ.1-ಬಿ ಎಂದು ಗುರುತಿಸಲಾಯಿತು.

ಸಾಕ್ಷಿಗೆ ಈ ಹಂತದಲ್ಲಿ ಒಂದು ದಾಖಲೆ ತೋರಿದ್ದು ಸದರಿ ದಾಖಲೆ ಪ್ರ.ವ.ವರದಿಯಾಗಿದ್ದು ಅದನ್ನು ನಿಪಿ.5 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ.5-ಎ ಎಂದು ಗುರುತಿಸಲಾಯಿತು.

ಅದೇ ದಿನ ಚಾಸಾ.8 ಮತ್ತು 9 ರವರು ಆರೋಪಿಯನ್ನು ಪತ್ತೆ ಮಾಡಿ ನನ್ನ ಮುಂದೆ ಹಾಜರುಪಡಿಸಿ ವರದಿ ನೀಡಿರುತ್ತಾರೆ. ಸದರಿ ವರದಿಯನ್ನು ನೋಡಿದರೆ ಗುರುತಿಸುತ್ತೇನೆ.

ಸಾಕ್ಷಿಗೆ ಈ ಹಂತದಲ್ಲಿ ಒಂದು ದಾಖಲೆ ತೋರಿದ್ದು ಸದರಿ ದಾಖಲೆ ಚಾಸಾ.8 ಮತ್ತು 9 ರವರು ಆರೋಪಿ ನನ್ನ ಮುಂದೆ ಹಾಜರುಪಡಿಸಿದ ವರದಿಯಾಗಿದ್ದು ಅದನ್ನು ನಿಪಿ.6 ಎಂದು ಗುರುತಿಸಲಾಗಿದ್ದು ಸಾಕ್ಷಿಯ ಸಹಿಯನ್ನು ನಿಪಿ.6-ಎ ಎಂದು ಗುರುತಿಸಲಾಯಿತು.

ದಿಃ 13.03.2018 ರಂದು ಆರೋಪಿಯನ್ನು ವಿಚಾರಿಸಿ ದಸ್ತಗಿರಿ ಕ್ರಮ ಅನುಸರಿಸಿ ದಸ್ತಗಿರಿ ಮಾಡಿ ಆರೋಪಿಯನ್ನು ನಮ್ಮ ಠಾಣಾ ಸುರ್ಪದಿಯನ್ನು ಇಟ್ಟುಕೊಂಡಿರುತ್ತೇನೆ. ಸದರಿ ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ನ್ಯಾಯಾಲಯದ ಮುಂದಿರುವ ಆರೋಪಿಯಾಗಿರುತ್ತಾರೆ.

ದಿಃ 14.03.2018 ರಂದು ಆರೋಪಿಯನ್ನು ವೈದ್ಯಕೀಯ ತಪಾಸಣೆ ಮಾಡಿಸಿ ಸೂಕ್ತ ಬೆಂಗಾವಳಿನೊಂದಿಗೆ ಮತ್ತು ರಿಮ್ಯಾಂಡ್ ಅರ್ಜಿಯೊಂದಿಗೆ ಆರೋಪಿಯನ್ನುನ್ಯಾಯಾಲಯಕ್ಕೆ ಸಲ್ಲಿಸುತ್ತೇನೆ.

ಅದೇ ದಿನ ಈ ಪ್ರಕರಣದ ಕಡತವನ್ನು ಚಾಸಾ.12 ರವರಿಗೆ ವರ್ಗಾಯಿಸುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ</u>

ಚಾಸಾ.1 ಮತ್ತು 2 ರವರು ಕೆ.ಎಸ್.ಐ.ಎಸ್.ಎಫ್. ರಲ್ಲಿ ಕೆಲಸ ಮಾಡುತ್ತಾರೆ ಎಂದರೆ ಸರಿ. ಸಾಕ್ಷಿ ಮುಂದುವರೆದು ಚಾಸಾ.1 ಮತ್ತು 2 ರವರು ಗೃಹ ಇಲಾಖೆಯ ಅಧೀನದಲ್ಲಿ ಕೆಲಸ ಮಾಡುತ್ತಿರುತ್ತಾರೆ ಎಂದು ನುಡಿಯುತ್ತಾರೆ. ನಿಪಿ.1 ದೂರು ನೀಡುವ ಕಾಲಕ್ಕೆ ಚಾಸಾ.1 ರವರು ಮಾತ್ರ ನಮ್ಮ ಠಾಣೆಗೆ ಬಂದಿರುತ್ತಾರೆ.

ಚಾಸಾ.1 ಮತ್ತು 2 ರವರು ನಮ್ಮ ಇಲಾಖಾ ನೌಕರರಾಗಿರುವುದರಿಂದ ಅವರಿಗೆ ಸಹಾಯ ಮಾಡಲು ಆರೋಪಿ ವಿರುದ್ದ ಸುಳ್ಳು ದೂರನ್ನು ಸ್ವೀಕರಿಸಿ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇವೆ ಎಂದರೆ ಸರಿಯಲ್ಲ. ಚಾಸಾ.1 ರವರು ನೀಡಿದ ಸುಳ್ಳು ದೂರಿನ ಆಧಾರದ ಮೇಲೆ ಆರೋಪಿತರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ .